# ಬೆಂಗಳೂರು ವಿಶ್ವವಿದ್ಯಾಲಯ

ಸಂಖ್ಯೆ: ಆರ್.ಪಿ.ಎಸ್/ಇತರೆ/2019-20

ಜ್ಞಾನಭಾರತಿ
ಬೆಂಗಳೂರು-560 056

ದಿನಾಂಕ: 26.08.2019

## ಸುತ್ತೋಲೆ

ಉಲ್ಲೇಖ: 1. ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 146 ಯುಎನ್ಇ 2019, ದಿನಾಂಕ: 14.08.2019

2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 23.08.2019

** * **

ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಯವರು, ಉನ್ನತ ಶಿಕ್ಷಣ ಇಲಾಖೆ, ಇವರ ಕಛೇರಿಯಿಂದ ಉಲ್ಲೇಖಿತ ಸುತ್ತೋಲೆಯಲ್ಲಿ ಸರ್ಕಾರವು ಈ ಕೆಳಕಂಡ ನಿರ್ದೇಶನಗಳನ್ನು ನೀಡಿದೆ.

1. ಪ್ರವಾಹ ಪೀಡಿತ ಪ್ರದೇಶಗಳಲ್ಲಿನ ವಿದ್ಯಾರ್ಥಿಗಳು ಗುಣಮಟ್ಟದ ಶಿಕ್ಷಣಕ್ಕಾಗಿ ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಗೊಳ್ಳಲು ಬಯಸಿದ್ದಲ್ಲಿ, ಅಂತಹ ವಿದ್ಯಾರ್ಥಿಗಳಿಗೆ ಪ್ರವೇಶಾತಿ ನೀಡಿ ಹಾಜರಾತಿ, ಹಾಸ್ಟೇಲ್ ಸೌಲಭ್ಯ ಒದಗಿಸುವಂತೆ ಹಾಗೂ ವಿಶೇಷ ತರಗತಿಗಳನ್ನು ನಡೆಸುವ ಮೂಲಕ ಪಠ್ಯಕ್ರಮಗಳನ್ನು ಪೂರ್ಣಗೊಳಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.
2. ವಿದ್ಯಾರ್ಥಿಗಳ ನೀರುಪಾಲಾಗಿರಬಹುದಾದ ಶೈಕ್ಷಣಿಕ ಪ್ರಮಾಣ ಪತ್ರಗಳು, ಪುಸ್ತಕಗಳು, ಬ್ಯಾಗ್ ಇತ್ಯಾದಿ ಅಗತ್ಯ ವಸ್ತುಗಳನ್ನು ಅವರಿಗೆ ಉಚಿತವಾಗಿ ಒದಗಿಸಲು ಕ್ರಮಕೈಗೊಳ್ಳುವುದು.
3. ಪ್ರವಾಹ ಪೀಡಿತ ಭಾಗಗಳಲ್ಲಿರುವ ವಿದ್ಯಾರ್ಥಿಗಳ ಯೋಗಕ್ಷೇಮವನ್ನು ನೋಡಿಕೊಂಡು ಸಂತ್ರಸ್ತರಿಗೆ ಹೆಚ್ಚಿನ ಆತ್ಮಸ್ಥೈರ್ಯ ತುಂಬಲು ಸಹಕಾರ ನೀಡುವುದು.
4. ವಿಶ್ವವಿದ್ಯಾಲಯಗಳು ಮತ್ತು ಸಂಯೋಜಿತ ಕಾಲೇಜುಗಳಲ್ಲಿನ ಎನ್.ಎಸ್.ಎಸ್. ಮತ್ತು ಎನ್.ಸಿ.ಸಿ. ಘಟಕಗಳ ಕ್ಯಾಂಪುಗಳನ್ನು ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಆಯೋಜಿಸಿ, ಪ್ರವಾಹ ಪೀಡಿತ ಮತ್ತು ಹಾನಿಯಾಗಿರುವ ಪ್ರದೇಶಗಳಲ್ಲಿ ಸ್ವಚ್ಛತೆಯನ್ನು ಕೈಗೊಳ್ಳಲು ಹಾಗೂ ಸಂತ್ರಸ್ತರಲ್ಲಿ ಆತ್ಮಸ್ಥೈರ್ಯ ತುಂಬಲು ಹಾಗೂ ಜಿಲ್ಲಾಡಳಿತಗಳು ಕೈಗೊಳ್ಳುವ ಪುನರ್ವಸತಿ ಕಾರ್ಯಕ್ರಮಗಳಲ್ಲಿ ಜಿಲ್ಲಾಡಳಿತಕ್ಕೆ ಅಗತ್ಯ ಸಹಕಾರ ನೀಡುವುದು.
5. ಪ್ರವಾಹ ಪೀಡಿತ ಪ್ರದೇಶಗಳ ವಿದ್ಯಾರ್ಥಿಗಳಿಗೆ ಅಗತ್ಯ ಸಾರಿಗೆ ವ್ಯವಸ್ಥೆ ಮತ್ತು ಕುಡಿಯುವ ನೀರಿನ ಸೌಲಭ್ಯವನ್ನು ಒದಗಿಸಲು ಕ್ರಮಕೈಗೊಳ್ಳುವುದು.
6. ವಿದ್ಯಾರ್ಥಿಗಳಿಗೆ ಉಂಟಾಗಿರಬಹುದಾದ ಆಘಾತದಿಂದ ಹೊರಬರುವಂತಾಗಲು ನಿಮ್ಹಾನ್ಸ್ ವತಿಯಿಂದ ನಡೆಸುತ್ತಿರುವ ಯುವ ಸ್ಪಂದನದ ಮೂಲಕ ವಿದ್ಯಾರ್ಥಿಗಳಿಗೆ ಕೌನ್ಸಿಲಿಂಗ್ ನೀಡುವ ವ್ಯವಸ್ಥೆಗಳನ್ನು ಕಲ್ಪಿಸಿ, ಅಲ್ಲಿನ ವಿದ್ಯಾರ್ಥಿಗಳ ಸಮಸ್ಯೆಗಳನ್ನು ಪರಿಹರಿಸಲು ಕ್ರಮಕೈಗೊಳ್ಳುವುದು.
7. ವಿದ್ಯಾರ್ಥಿಗಳಿಗೆ ಅಗತ್ಯ ಸಹಕಾರ ನೀಡುವಲ್ಲಿ ಹಾಗೂ ಮನೋಸ್ಥೈರ್ಯವನ್ನು ತುಂಬುವಲ್ಲಿ ಸ್ಥಳೀಯವಾಗಿ ಅಗತ್ಯವೆನಿಸಿದ ಕ್ರಮಗಳನ್ನು ವಿಶ್ವವಿದ್ಯಾಲಯಗಳು ಮತ್ತು ಸಂಯೋಜಿತ ಕಾಲೇಜುಗಳು ಹಾಗೂ ಕಾಲೇಜು ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಹಾಗೂ ಎನ್.ಸಿ.ಸಿ. ನಿರ್ದೇಶನಾಲಯದಿಂದ ಕೈಗೊಳ್ಳುವುದು.
8. ಈ ಎಲ್ಲಾ ಮಾಹಿತಿಗಳು ವಿದ್ಯಾರ್ಥಿಗಳಿಗೆ ಹಾಗೂ ಪೋಷಕರುಗಳ ಗಮನಕ್ಕೆ ತರಲು ಅನುಕೂಲವಾಗುವಂತೆ ಜಿಲ್ಲಾಧಿಕಾರಿಗಳ ಕಛೇರಿ/ವಿಶ್ವವಿದ್ಯಾಲಯಗಳ ಮತ್ತು ಸಂಯೋಜಿತ ಕಾಲೇಜುಗಳ ಸೂಚನಾ ಫಲಕಗಳಲ್ಲಿ ಪೋಸ್ಟರ್‌ಗಳನ್ನು ಅಳವಡಿಸಲು ಕ್ರಮವಹಿಸುವಂತೆ ಹಾಗೂ ಇಲಾಖೆಯ ವತಿಯಿಂದ ಕೈಗೊಳ್ಳಲಾಗುತ್ತಿರುವ ಸಹಾಯಕ ಕ್ರಮಗಳ ಬಗ್ಗೆ ಪತ್ರಿಕಾ ಪ್ರಕಟಣೆ/ದೃಶ್ಯ ಮಾಧ್ಯಮ/ಸಾಮಾಜಿಕ ಜಾಲತಾಣಗಳ ಮೂಲಕ ಸಾರ್ವಜನಿಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಲು ಕ್ರಮವಹಿಸುವುದು.

...2

ಪ್ರವಾಹ ಸಂತ್ರಸ್ತ ಸ್ಥಳಗಳ ವಿದ್ಯಾರ್ಥಿಗಳು ಸಂಪರ್ಕಿಸಿದಲ್ಲಿ, ಅಂತಹ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲು ಹಾಗೂ ವಿಶೇಷ ತರಗತಿಗಳು ನಡೆಸುವ ಮೂಲಕ ಪಠ್ಯಕ್ರಮ ಪೂರ್ಣಗೊಳ್ಳಲು ಅಗತ್ಯಕ್ರಮ ಕೈಗೊಳ್ಳುವಂತೆ ವಿಶ್ವವಿದ್ಯಾಲಯದ ಎಲ್ಲಾ ಸ್ನಾತಕೋತ್ತರ ವಿಭಾಗ/ಕೋರ್ಸ್‌ಗಳ ಮುಖ್ಯಸ್ಥರು/ನಿರ್ದೇಶಕರು/ಸಂಯೋಜನಾಧಿಕಾರಿಗಳಿಗೆ ಈ ಮೂಲಕ ತಿಳಿಸಲಾಗಿದೆ.

ಸದರಿ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯಗಳ ಅವಶ್ಯಕತೆ ಇದ್ದಲ್ಲಿ, ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ಕಲ್ಪಿಸುವ ಬಗ್ಗೆ ಅಗತ್ಯಕ್ರಮ ವಹಿಸುವಂತೆ ಎಲ್ಲಾ ವಿದ್ಯಾರ್ಥಿನಿಲಯಗಳ ಕ್ಷೇಮಪಾಲಕರು ಹಾಗೂ ನಿರ್ದೇಶಕರು, ವಿದ್ಯಾರ್ಥಿಕ್ಷೇಮಾಭಿವೃದ್ಧಿ, ಇವರಿಗೆ ಸೂಚಿಸಿದೆ.

ಸದರಿ ವಿದ್ಯಾರ್ಥಿಗಳು ಸಂಪರ್ಕಿಸಿದ್ದಲ್ಲಿ, ಶೈಕ್ಷಣಿಕ ಪ್ರಮಾಣ ಪತ್ರಗಳ ನಕಲು ಪ್ರತಿಯನ್ನು ಉಚಿತವಾಗಿ ಒದಗಿಸಲು ಕ್ರಮಕೈಗೊಳ್ಳುವಂತೆ ಕುಲಸಚಿವರು (ಮೌಲ್ಯಮಾಪನ), ಇವರಿಗೆ ಕೋರಲಾಗಿದೆ.

ಕುಲಸಚಿವರು 26/8/2019

ಗೆ,

1. ಕುಲಸಚಿವರು (ಮೌಲ್ಯಮಾಪನ), ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು.
2. ವಿಶ್ವವಿದ್ಯಾಲಯದ ಘಟಕ ಕಾಲೇಜುಗಳ ಪ್ರಾಂಶುಪಾಲರುಗಳಿಗೆ,
3. ವಿಶ್ವವಿದ್ಯಾಲಯದ ಸ್ನಾತಕೋತ್ತರ ವಿಭಾಗಗಳ ಮುಖ್ಯಸ್ಥರು/ನಿರ್ದೇಶಕರು/ಸಂಯೋಜನಾಧಿಕಾರಿಗಳಿಗೆ,
4. ನಿರ್ದೇಶಕರು, ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ವಿಭಾಗ, ಬೆಂ.ವಿ.ವಿ.
5. ಉಪಕುಲಸಚಿವರು, ವಿದ್ಯಾಕಾರ್ಯಶಾಖೆ-1, ಮತ್ತು 4, ಬೆಂ.ವಿ.ವಿ.

ಪ್ರತಿ:

ಆಪ್ತ ಕಾರ್ಯದರ್ಶಿಗಳು, ಕುಲಪತಿಗಳ ಕಾರ್ಯಾಲಯ, ಬೆಂ.ವಿ.ವಿ.